ಆಹಾರ ಧಾನ್ಯಗಳ ಹಂಚಿಕೆ

992 (1512) ಶ್ರೀ ಕಾಕಾಸಾಹೇಬ್ ಪಾಂಡುರಂಗ ಪಾಟೀಲ್ (ನಿಪ್ಪಾಣಿ) : ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಿಪ್ಪಾಣಿ ವಿಧಾನಸಭಾ ಕ್ಷೇತ್ರದ ಹಲವಾರು ಹಳ್ಳಿಗಳಲ್ಲಿ ವಾಸಿಸುತ್ತಿರುವ ಪಡಿತರ ಚೀಟಿದಾರರಿಗೆ ಆಹಾರ ಧಾನ್ಯಗಳನ್ನು ಹಂಚದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಿಪಿಎಲ್ ಪಡಿತರ ಚೀಟಿಗಳನ್ನು ಹಂಚದೇ ಇರುವುದರಿಂದ ಮತ್ತು ಪಡಿತರ ಚೀಟಿದಾರರಿಗೆ ಆಹಾರಧಾನ್ಯಗಳನ್ನು ಹಂಚದೇ ಇರುವುದ ರಿಂದ ಫಲಾನುಭವಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಈ ಸಂಬಂಧ ಸರ್ಕಾರ ಕೈಗೊಂಡಿರುವ ಪರ್ಯಾಯ ವ್ಯವಸ್ಥೆಯೇನು?

ಶ್ರೀ ಹೆಚ್. ಹಾಲಪ್ಪ (ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು) :

ಅ) ನಿಪ್ಪಾಣಿ ಕ್ಷೇತ್ರಕ್ಕೆ ಸಂಬಂಧಿಸಿದ ಎಲ್ಲಾ ಹಳ್ಳಿಗಳ ಕಾರ್ಡುದಾರರಿಗೆ ತಪ್ಪದೆ ಆಹಾರಧಾನ್ಯಗಳನ್ನು ವಿತರಿಸಲಾಗುತ್ತಿದೆ. ಆಹಾರ ಧಾನ್ಯಗಳನ್ನು ವಿತರಿಸದೆ ಇರುವ ಬಗ್ಗೆ ಯಾವುದೇ ದೂರುಗಳು ಬಂದಿರುವುದಿಲ್ಲ.

ಆ) ಇಲ್ಲ.

ಎಲ್ಲಾ ಅರ್ಹ ಬಿಪಿಎಲ್ ಫಲಾನುಭವಿಗಳಿಗೆ ತಾತ್ಕಾಲಿಕ ಪಡಿತರ ಚೀಟಿಯನ್ನು ವಿತರಿಸಲಾಗಿರುತ್ತದೆ ಮತ್ತು ಅವರಿಗೆ ಆಹಾರ ಧಾನ್ಯಗಳನ್ನು ಪ್ರತಿ ತಿಂಗಳು ತಪ್ಪದೆ ಬಿಡುಗಡೆ ಮಾಡಲಾಗುತ್ತಿದೆ.

ಇ) ಈಗ ಸರ್ಕಾರ ತಾತ್ಕಾಲಿಕ ಪಡಿತರ ಚೀಟಿಯ ಬದಲಿಗೆ ಖಾಯಂ ಗಣಕೀಕೃತ ಪಡಿತರ ಚೀಟಿಗಳನ್ನು ವಿತರಿಸುವ ಕಾರ್ಯವನ್ನು ಕೈಗೊಂಡಿರುತ್ತದೆ. ಈ ಕಾರ್ಯ ಸಂಪೂರ್ಣಗೊಂಡ ನಂತರ ಪ್ರತಿ ತಾಲ್ಲೂಕಿನಲ್ಲಿ ಒಂದು ಕಛೇರಿಯನ್ನು (Back office) ತೆರೆದು ಆ

ಕಛೇರಿಯಲ್ಲಿ ಕಾರ್ಡುದಾರರ ಎಲ್ಲಾ ಕುಂದು ಕೊರತೆಯನ್ನು ಬಗೆಹರಿಸಲು ಕ್ರಮ ಕೈಗೊಳ್ಳಲಾಗುವುದು.

ರಾಷ್ಟ್ರೀಯ ತೋಟಗಾರಿಕೆ ಮಿಷನ್ ಕಾರ್ಯಕ್ರಮಗಳು

993 (1515) ಶ್ರೀ ಖಾದರ್ ಯು.ಟಿ. (ಮಂಗಳೂರು) : ಮಾನ್ಯ ತೋಟಗಾರಿಕೆ ಮತ್ತು ಬಂಧಿಖಾನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಅನುಷ್ಠಾನಗೊಳಿಸುತ್ತಿರುವ ಕಾರ್ಯಕ್ರಮಗಳಾವುವು?

ಆ) ಈ ಯೋಜನೆಗೆ ಕೇಂದ್ರ ಸರ್ಕಾರ ನೀಡುತ್ತಿರುವ ಹಣ ಎಷ್ಟು;

ಇ) ರಾಜ್ಯ ಸರ್ಕಾರವು ಈ ಯೋಜನೆಗಾಗಿ ಎಷ್ಟು ಹಣ ಬಿಡುಗಡೆಗೊಳಿಸುತ್ತಿದೆ;

ಈ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಈ ಯೋಜನೆಯನ್ನು ಪ್ರಾರಂಭಿಸಲಾಗಿದೆಯೇ; (ಕ್ಷೇತ್ರವಾರು ವಿವರ ನೀಡುವುದು)?

ಶ್ರೀ ಉಮೇಶ್ ವಿ. ಕತ್ತಿ (ತೋಟಗಾರಿಕೆ ಮತ್ತು ಬಂಧಿಖಾನೆ ಸಚಿವರು) :

ಅ) ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಅನುಷ್ಠಾನಗೊಳಿಸುತ್ತಿರುವ ಕಾರ್ಯಕ್ರಮಗಳು ಈ ಕೆಳಗಿನಂತಿವೆ.

The programmes being implemented under National Horticulture Mission scheme is given below.

1. ಸಸ್ಯಾಭಿವೃದ್ಧಿ, Nurseries
2. ಹಾಲಿ ಇರುವ ಅಂಗಾಂಶ ಕೃಷಿ ಘಟಕಗಳ ಪುನಶ್ಚೇತನ
   Rehabilitation of existing Tissue Culture Laboratories.
3. ತರಕಾರಿ ಬೀಜೋತ್ಪಾದನೆ ಹಾಗೂ ಬೀಜ ಸಂಸ್ಕರಣೆಗೆ ಮೂಲಭೂತ ಸೌಕರ್ಯ
   Vegetable Seed Production & infrastructure